# ವಿದ್ಯಾರ್ಥಿಗಳಿಗೆ ತಂತ್ರಜ್ಞಾನದ ಮಾಹಿತಿ ಅವಶ್ಯ: ಕಬಾಡಿ



**ಹಳಿಯಾಳ:** ಕೆಎಲ್‌ಎಸ್ ವಿಡಿಐಟಿಹಳಿಯಾಳದಲ್ಲಿ ಕೇಂದ್ರ ಸರ್ಕಾರದ ಶಿಕ್ಷಣ ಸಚಿವಾಲಯದ ಆವಿಷ್ಕಾರ ಪರಿಷತ್ತಿನ (ಐಐಸಿ) ವತಿಯಿಂದ ವಿದ್ಯಾರ್ಥಿಗಳಿಗೆ ಉದ್ಯಮಶೀಲತೆ ಪ್ರೋತ್ಸಾಹಿಸುವ ಪ್ರಭಾವ ಉಪನ್ಯಾಸ ಸರಣಿಯನ್ನು ಆಯೋಜಿಸಲಾಗಿತ್ತು.

ಈ ಸರಣಿಯ ಒಂದನೇ ಉಪನ್ಯಾಸ ಕಾರ್ಯಕ್ರಮಕ್ಕೆ ಸಂಪನ್ಮೂಲ ವ್ಯಕ್ತಿಗಳಾಗಿ ಹುಬ್ಬಳ್ಳಿಯ ಡೋಕೆಟ್ರಿನ್ ಟೆಕ್ ಪ್ರೈ. ಲಿ. ನ ಸಂಸ್ಥಾಪಕ ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಜಯ್ ಕಬಾಡಿ ಮಾತನಾಡಿ, ನೂತನ ತಂತ್ರಜ್ಞಾನಗಳಾದ ಕೃತಕ ಬುದ್ಧಿ ಮತ್ತೆ , ಯಂತ್ರ ಕಲಿಕೆ ಇವುಗಳಿಂದ ವಿನೂತನ ಆವಿಷ್ಕಾರಗಳನ್ನು ಮಾಡಲಾಗುತ್ತಿದ್ದು, ವಿದ್ಯಾರ್ಥಿಗಳು ತಂತ್ರಜ್ಞಾನಗಳ ಕುರಿತು ಮಾಹಿತಿ ಹೊಂದುವುದು ಅತ್ಯವಶ್ಯವಾಗಿದೆ ಎಂದರು.

ಈ ಸರಣಿಯ ಎರಡನೇ ಉಪನ್ಯಾಸ ಕಾರ್ಯಕ್ರಮಕ್ಕೆ ಸಂಪನ್ಮೂಲ ವ್ಯಕ್ತಿಯಾಗಿ ಬೆಂಗಳೂರಿನ ಎನ್ವಿರಾನಿಕ್ ಸಂಸ್ಥೆಯ ನಿರ್ದೇಶಕ ಮುರಳಿ ಅನೂರ್ ಮಾತನಾಡಿ,

ವಿದ್ಯಾರ್ಥಿಗಳು ನಾಯಕತ್ವ ಗುಣವನ್ನು ಬೆಳೆಸಿಕೊಳ್ಳಬೇಕು. ಯಶಸ್ವಿ ಉದ್ಯಮಶೀಲರಾಗಲು ವಿದ್ಯಾರ್ಥಿಗಳು ಹೊಸ ಆವಿಷ್ಕಾರಗಳ ಕುರಿತು ಮಾಹಿತಿ ಹೊಂದುವುದು ಅತ್ಯಗತ್ಯ. ಉದ್ಯಮ ಕ್ಷೇತ್ರದಲ್ಲಿ ಎದುರಾಗುವ ಸವಾಲುಗಳನ್ನು ಸಮರ್ಥವಾಗಿ ಎದುರಿಸುವ ಮನೋಸ್ಥೈರ್ಯವನ್ನು ವಿದ್ಯಾರ್ಥಿಗಳು ಬೆಳೆಸಿಕೊಳ್ಳಬೇಕೆಂದು ಹೇಳಿದರು.

> **ನೂತನ ಆವಿಷ್ಕಾರಗಳು ಹಾಗೂ ಬೌದ್ಧಿಕ ಆಸ್ತಿ ಹಕ್ಕು, ನಾಯಕತ್ವ ಗುಣ ಹೊಂದುವ ಕುರಿತು ಅರಿವು ಹೊಂದಲು ವಿದ್ಯಾರ್ಥಿಗಳಿಗೆ ಈ ಕಾರ್ಯಕ್ರಮ ಸಹಕಾರಿಯಾಗಿದೆ.**
>
> ■ **ಡಾ. ವಿ.ಎ. ಕುಲಕರ್ಣಿ,**
> **ಪ್ರಾಚಾರ್ಯ**

ಆವಿಷ್ಕಾರ ಪರಿಷತ್ತಿನ ಅಧ್ಯಕ್ಷ ಡಾ. ಮಹೇಂದ್ರ ದೀಕ್ಷಿತ್ ಕಾರ್ಯಕ್ರಮ ಸಂಯೋಜಿಸಿದ್ದರು. ಮಹಾವಿದ್ಯಾಲಯದ ಆವಿಷ್ಕಾರ ಪರಿಷತ್ತಿನ ವತಿಯಿಂದ ಆಯೋಜಿಸಿದ್ದ ಈ ಕಾರ್ಯಗಾರದಲ್ಲಿ 180 ಕ್ಕೂ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಈ ಸರಣಿ ಉಪನ್ಯಾಸಗಳನ್ನು ಕೇಂದ್ರ ಶಿಕ್ಷಣ ಸಚಿವಾಲಯದ ಅನುದಾನದಡಿಯಲ್ಲಿ ಆಯೋಜಿಸಲಾಗಿತ್ತು. ಕೆಎಲ್‌ಎಸ್ ವಿಡಿಐಟಿ ಸೇರಿದಂತೆ ದೇಶಾದ್ಯಂತ ಒಟ್ಟು 181 ಶಿಕ್ಷಣ ಸಂಸ್ಥೆಗಳು ಈ ಅನುದಾನಕ್ಕೆ ಆಯ್ಕೆಯಾಗಿವೆ.

# ಶಿಸ್ತು ಬದ್ಧ ಯೋಜನೆ ರೂಪಿಸಿಕೊಳ್ಳಿ: ಆದಿತ್ಯ

**ಹಳಿಯಾಳ:** ಉದ್ಯಮಶೀಲರಾಗಲು ವಿದ್ಯಾರ್ಥಿಗಳಿಗೆ



ಉತ್ತಮ ಅವಕಾಶಗಳಿದ್ದು, ಉದ್ಯಮಶೀಲರಾಗಲು ವಿದ್ಯಾರ್ಥಿಗಳು ಶಿಸ್ತು ಬದ್ಧ ಯೋಜನೆಯನ್ನು ರೂಪಿಸಿಕೊಳ್ಳಬೇಕು ಎಂದು ಟ್ರೈಟೋನ್ ವಾಲ್ವ್, ಮೈಸೂರಿನ ವ್ಯವಸ್ಥಾಪಕ ನಿರ್ದೇಶಕ ಆದಿತ್ಯ ಗೋಕರ್ಣ ಹೇಳಿದರು.

ಪಟ್ಟಣದ ಕೆಎಲ್‌ಎಸ್ ವಿಡಿಐಟಿ ಮಹಾವಿದ್ಯಾಲಯವು ದಿ. ವಿಶ್ವನಾಥ್ ರಾವ್ ದೇಶಪಾಂಡೆ ಅವರ ಜನ್ಮದಿನದ ಪ್ರಯುಕ್ತ ಆಯೋಜಿಸಿದ್ದ ಉದ್ಯಮಶೀಲತೆಯ ಕುರಿತು ಅರಿವು ಮೂಡಿಸುವ ಉಪನ್ಯಾಸ ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಮಾತನಾಡಿ, ವಿದ್ಯಾರ್ಥಿಗಳು ಉದ್ಯಮಶೀಲರಾಗಿ ಹೊರಹೊಮ್ಮಿದಲ್ಲಿ ಉತ್ತಮ ಜೀವನವನ್ನು ರೂಪಿಸಿಕೊಳ್ಳಬಹುದು ಹಾಗೂ ದೇಶವನ್ನು ಆರ್ಥಿಕ ಸದೃಢವನ್ನಾಗಿಸಬಹುದು ಎಂದರು.

ಪ್ರಾಚಾರ್ಯ ಡಾ. ವಿ.ಎ. ಕುಲಕರ್ಣಿ ಅಧ್ಯಕ್ಷತೆ ವಹಿಸಿದ್ದರು. ಡೀನ್ ಪ್ರೊ. ಸುಧೀರ್ ಕುಲಕರ್ಣಿ, ಟ್ರೈನಿಂಗ್ ಅಂಡ್ ಪ್ಲೇಸ್ಮೆಂಟ್ ಸಂಚಾಲಕ ಪ್ರೊ. ರಜತ್ ಆಚಾರ್ಯ, ಪ್ರೊ. ನವೀನ್ ಹಿರೇಮಠ್ ಕಾರ್ಯಕ್ರಮವನ್ನು ಆಯೋಜಿಸಿದ್ದರು. ಟ್ರೈನಿಂಗ್ ಅಂಡ್ ಪ್ಲೇಸ್ಮೆಂಟ್ ವಿಭಾಗದ ವತಿಯಿಂದ ಆಯೋಜಿಸಿದ್ದ ಈ ಕಾರ್ಯಕ್ರಮದಲ್ಲಿ 150ಕ್ಕೂ ಅಧಿಕ ವಿದ್ಯಾರ್ಥಿಗಳು ಇದ್ದರು.

ಲೋಕಧ್ವನಿ
ಸಾಮೀಪ್ಯವೇ ಆಪ್ಯ

# ಉದ್ಯಮಶೀಲತೆ ಉಪನ್ಯಾಸ



**ಹಳಿಯಾಳ:** ಉದ್ಯಮಶೀಲರಾಗಲು ವಿದ್ಯಾರ್ಥಿಗಳಿಗೆ ಉತ್ತಮ ಅವಕಾಶಗಳಿವೆ ಎಂದು ಟ್ರಿಟೋನ್ ವಾಲ್ವ್, ಮೈಸೂರಿನ ವ್ಯವಸ್ಥಾಪಕ ನಿರ್ದೇಶಕ ಆದಿತ್ಯ ಗೋಕರ್ಣ ಹೇಳಿದರು.

ಪಟ್ಟಣದ ಕೆಎಲ್‌ಎಸ್ ವಿಡಿಐಟಿ ಮಹಾವಿದ್ಯಾಲಯದಲ್ಲಿ ಜುಲೈ 1ರಂದು ಜರುಗಿದ ದಿ. ವಿಶ್ವನಾಥ್ ರಾವ್ ದೇಶಪಾಂಡೆ ಅವರ ಜನ್ಮದಿನದ ಪ್ರಯುಕ್ತ ಉದ್ಯಮಶೀಲತೆಯ ಕುರಿತು ಅರಿವು ಮೂಡಿಸುವ ಉಪನ್ಯಾಸ ನೀಡಿದರು.

ಉದ್ಯಮಶೀಲರಾಗಲು ವಿದ್ಯಾರ್ಥಿಗಳು ಶಿಸ್ತು ಬದ್ಧ ಯೋಜನೆಯನ್ನು ರೂಪಿಸಿಕೊಳ್ಳುವಂತೆ ಕರೆ ನೀಡಿದರು. ಉದ್ಯಮಶೀಲತೆಯ ಹಾದಿಯಲ್ಲಿರುವ ಅಡೆತಡೆಗಳ ಕುರಿತು ಮಾಹಿತಿ ನೀಡಿದರು. ಸ್ಟಾರ್ಟ್ ಅಪ್ ನ್ನು ಪ್ರಾರಂಭಿಸಲು ಸರ್ಕಾರವು ಒದಗಿಸುತ್ತಿರುವ ಸವಲತ್ತುಗಳ ಕುರಿತು ಸವಿಸ್ತಾರವಾಗಿ ತಿಳಿಸಿದರು. ವಿದ್ಯಾರ್ಥಿಗಳು ಉದ್ಯಮಶೀಲರಾಗಿ ಹೊರಹೊಮ್ಮಿದಲ್ಲಿ ಉತ್ತಮ ಜೀವನವನ್ನು ರೂಪಿಸಿಕೊಳ್ಳಬಹುದು ಹಾಗೂ ದೇಶವನ್ನು ಆರ್ಥಿಕ ಸದೃಢವನ್ನಾಗಿಸಬಹುದೆಂದು ಹೇಳಿದರು.

ಪ್ರಾಚಾರ್ಯ ಡಾ. ವಿ. ಎ. ಕುಲಕರ್ಣಿ ಅಧ್ಯಕ್ಷತೆ ವಹಿಸಿದ್ದರು. ಡೀನ್ ಪ್ರೊ. ಸುಧೀರ್ ಕುಲಕರ್ಣಿ, ಟ್ರೈನಿಂಗ್ ಅಂಡ್ ಪ್ಲೇಸ್ಮೆಂಟ್ ಸಂಚಾಲಕ ಪ್ರೊ. ರಜತ್ ಆಚಾರ್ಯ, ಪ್ರೊ. ನವೀನ್ ಹಿರೇಮಠ್ ಕಾರ್ಯಕ್ರಮವನ್ನು ಆಯೋಜಿಸಿದ್ದರು. ಟ್ರೈನಿಂಗ್ ಆ್ಯಂಡ್ ಪ್ಲೇಸ್ಮೆಂಟ್ ವಿಭಾಗದ ವತಿಯಿಂದ ಆಯೋಜಿಸಿದ್ದ ಈ ಕಾರ್ಯಕ್ರಮದಲ್ಲಿ 150ಕ್ಕೂ ಅಧಿಕ ವಿದ್ಯಾರ್ಥಿಗಳು ಭಾಗವಹಿಸಿದ್ದರು.

Main Edition Edition
Jul 03, 2024 Page No. 3
Powered by: erelego.com

# ಉದ್ಯಮಶೀಲತೆ: ಉಪನ್ಯಾಸ

**ಸಾಗರ ಸಾಮ್ರಾಟ ಸಮಾಚಾರ**

**ಹಳಿಯಾಳ:** ಉದ್ಯಮಶೀಲರಾಗಲು ವಿದ್ಯಾರ್ಥಿಗಳಿಗೆ ಉತ್ತಮ ಅವಕಾಶಗಳಿವೆ ಎಂದು ಆದಿತ್ಯ ಗೋಕರ್ಣ ಹೇಳಿದರು.

ಪಟ್ಟಣದ ಕೆ ಎಲ್ ಎಸ್ ವಿ ಡಿ ಐ ಟಿ ಮಹಾವಿದ್ಯಾಲಯವು ಜುಲೈ 1ರಂದು ದಿ. ವಿಶ್ವನಾಥ್ ರಾವ್ ದೇಶಪಾಂಡೆ ಅವರ ಜನ್ಮದಿನದ ಪ್ರಯುಕ್ತ ಉದ್ಯಮಶೀಲತೆಯ ಕುರಿತು ಅರಿವು ಮೂಡಿಸುವ ಉಪನ್ಯಾಸವನ್ನು ಆಯೋಜಿಸಿತ್ತು. ಕಾರ್ಯಕ್ರಮಕ್ಕೆ ಸಂಪನ್ಮೂಲ ವ್ಯಕ್ತಿಗಳಾಗಿ ಟ್ರಿಟೋನ್ ವಾಲ್ವ್, ಮೈಸೂರಿನ ವ್ಯವಸ್ಥಾಪಕ ನಿರ್ದೇಶಕ ಆದಿತ್ಯ ಗೋಕರ್ಣ ಆಗಮಿಸಿದ್ದರು.

ಉದ್ಯಮಶೀಲರಾಗಲು ವಿದ್ಯಾರ್ಥಿಗಳು ಶಿಸ್ತು ಬದ್ಧ ಯೋಜನೆಯನ್ನು ರೂಪಿಸಿಕೊಳ್ಳುವಂತೆ ಕರೆ ನೀಡಿದರು. ಉದ್ಯಮಶೀಲತೆಯ ಹಾದಿಯಲ್ಲಿರುವ ಅಡೆತಡೆಗಳ ಕುರಿತು ಮಾಹಿತಿ ನೀಡಿದರು. ಸ್ಟಾರ್ಟ್ ಅಪ್‌ನ್ನು ಪ್ರಾರಂಭಿಸಲು ಸರ್ಕಾರವು ಒದಗಿಸುತ್ತಿರುವ ಸವಲತ್ತುಗಳ




ಕುರಿತು ಸವಿಸ್ತಾರವಾಗಿ ತಿಳಿಸಿದರು. ವಿದ್ಯಾರ್ಥಿಗಳು ಉದ್ಯಮಶೀಲರಾಗಿ ಹೊರಹೊಮ್ಮಿದಲ್ಲಿ ಉತ್ತಮ ಜೀವನವನ್ನು ರೂಪಿಸಿಕೊಳ್ಳಬಹುದು ಹಾಗೂ ದೇಶವನ್ನು ಆರ್ಥಿಕ ಸದೃಢವನ್ನಾಗಿಸಬಹುದೆಂದು ಹೇಳಿದರು.

ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ ಅಧ್ಯಕ್ಷತೆ ವಹಿಸಿದ್ದರು. ಡೀನ್ ಪ್ರೊ. ಸುಧೀರ್ ಕುಲಕರ್ಣಿ, ಟ್ರೈನಿಂಗ್ ಅಂಡ್ ಪ್ಲೇಸ್ಮೆಂಟ್ ಸಂಚಾಲಕ ಪ್ರೊ. ರಜತ್ ಆಚಾರ್ಯ, ಪ್ರೊ. ನವೀನ್ ಹಿರೇಮಠ್ ಕಾರ್ಯಕ್ರಮವನ್ನು ಆಯೋಜಿಸಿದ್ದರು.